ಸಾಕ್ಷಿಗೆ ಕ್ರಮಬದ್ಧವಾಗಿ ಪ್ರಮಾಣ ವಚನವನ್ನು ಬೋಧಿಸಲಾಯಿತು.

ಮುಂದುವರೆದ ಮುಖ್ಯ ವಿಚಾರಣೆ ಅರ್ಜಿದಾರರ ಪರ ವಕೀಲರಿಂದಃ-

ಪ್ರಥಮ ವರ್ತಮಾನ ವರದಿಯ ದೃಢೀಕೃತ ನಕಲನ್ನು ನಿಪಿ-1 ಎಂದು, ದೂರಿನ ದೃಢೀಕೃತ ನಕಲನ್ನು ನಿಪಿ-2 ಎಂದು, ದೋಷಾರೋಪಣಾ ಪಟ್ಟಿಯ ದೃಢೀಕೃತ ನಕಲನ್ನು ನಿಪಿ-3 ಎಂದು, ಸ್ಥಳ ಪಂಚನಾಮೆಯ ದೃಢೀಕೃತ ನಕಲನ್ನು ನಿಪಿ-4 ಎಂದು, ಗಾಯದ ಪ್ರಮಾಣ ಪತ್ರವನ್ನು ನಿಪಿ-5 ಎಂದು, ಐಎಂವಿ ವರದಿಯ ದೃಢೀಕೃತ ನಕಲನ್ನು ನಿಪಿ-6 ಎಂದು, ಡಿಸ್ಚಾರ್ಜ್ ಸಮ್ಮರಿಯನ್ನು ನಿಪಿ-7 ಎಂದು, 19 ವೈದ್ಯರ ಸಲಹಾ ಚೀಟಿಗಳನ್ನು ಹಾಜರುಮಾಡಿದ್ದು ಅವುಗಳನ್ನು ಒಟ್ಟಾಗಿ ನಿಪಿ-8 ಎಂದು, 20 ವೈದ್ಯಕೀಯ ಬಿಲ್ಲುಗಳನ್ನು ಹಾಜರುಮಾಡಿದ್ದು ಅವುಗಳನ್ನು ಒಟ್ಟಾಗಿ ನಿಪಿ-9 ಎಂದು ಗುರುತಿಸಲಾಯಿತು.

ಪಾಟೀ ಸವಾಲು ಎದುರುದಾರರ ಪರ ವಕೀಲರಿಂದಃ-

ಎದುರುದಾರರು ಮತ್ತು ಅವರ ಪರ ವಕೀಲರನ್ನು ಕರೆಸಲಾಗಿ ಗೈರು ಹಾಜರಾಗಿರುವ ಕಾರಣ ಪಾಟೀ ಸವಾಲು ಇಲ್ಲ ಎಂದು ತೆಗೆದುಕೊಳ್ಳಲಾಯಿತು.

(ಸಾಕ್ಷಿಯು ಕೊಟ್ಟ ಸಾಕ್ಷ್ಯವನ್ನು ಬಹಿರಂಗ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನಕ್ಕೆ ಗಣಕೀಕರಿಸಿದೆ)

(ಸಾಕ್ಷಿಗೆ ಸಾಕ್ಷ್ಯವನ್ನು ಓದಿ ಹೇಳಲಾಗಿ ಕೇಳಿ ಸರಿ ಇದೆ ಎಂದು ಒಪ್ಪಿದ್ದಾರೆ)

(ನಿವೇದಿತ ಟಿ.ಎಂ.)
ರಾಮನಗರದ ಮೋಟಾರು ವಾಹನಗಳ ಅಪಘಾತದ
ಪರಿಹಾರಗಳ ಹೆಚ್ಚುವರಿ ನ್ಯಾಯಾ ಮಂಡಳಿಯ
ಪೀಠಾಧಿಕಾರಿಗಳು